# Bangalore
# Regional News
# 02.10.2025: 14.30hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು:</u>

**1.** ಮೈಸೂರಿನಲ್ಲಿ ವಿಶ್ವವಿಖ್ಯಾತ ಜಂಬೂಸವಾರಿಗೆ ಕ್ಷಣಗಣನೆ; ನಂದಿಧ್ವಜಕ್ಕೆ ಪೂಜೆ ಸಲ್ಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

**2.** ಕೇಂದ್ರದಿಂದ ರಾಜ್ಯಕ್ಕೆ ಮೂರು ಸಾವಿರದ ೭೦೫ ಕೋಟಿ ರೂಪಾಯಿ ಹೆಚ್ಚುವರಿ ತೆರಿಗೆ ಪಾಲು - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

**3.** ಬೆಂಗಳೂರಿನಲ್ಲಿ ವನ್ಯಜೀವಿ ಸಪ್ತಾಹಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಈಶ್ವರ್ ಖಂಡ್ರೆ ಚಾಲನೆ

**4.** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಗ್ಯ ವಿಚಾರಿಸಿದ ಪ್ರಧಾನಿ ನರೇಂದ್ರ ಮೋದಿ

**5.** ರಾಜ್ಯದ ವಿವಿಧೆಡೆ ಗಾಂಧಿ ಜಯಂತಿ ಆಚರಣೆ; ಮೈಸೂರಿನಲ್ಲಿ ಮುಖ್ಯಮಂತ್ರಿ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ

********

ನಾಡಹಬ್ಬ ದಸರಾದ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿಗೆ ಕ್ಷಣಗಣನೆ ಆರಂಭಗೊಂಡಿದೆ. ಪ್ರಮುಖ ಆಕರ್ಷಣೆಯಾದ ಜಂಬೂಸವಾರಿ ಮೆರವಣಿಗೆಯಲ್ಲಿ ಪಾಲ್ಗೊಳ್ಳಲ್ಲಿರುವ ಆನೆಗಳ ಮೇಲೆ ಕಲಾವಿದರು ರಾಜ ಲಾಂಛನ ಗಂಡಭೇರುಂಡ, ಶಂಖ, ಚಕ್ರ, ಹೂಬಳ್ಳಿಗಳು ಸೇರಿದಂತೆ ವಿವಿಧ ವಿನ್ಯಾಸಗಳಿಂದ ಅಲಂಕರಿಸಲಾಗಿದೆ. ಸಂಜೆ ೪.೪೨ರಿಂದ ೫ ಗಂಟೆ ೬ ನಿಮಿಷಕ್ಕೆ ಸಲ್ಲುವ ಶುಭ ಕುಂಭ ಲಗ್ನದಲ್ಲಿ ಜಂಬೂಸವಾರಿಗೆ ಚಿನ್ನದ ಅಂಬಾರಿಯಲ್ಲಿ ವಿರಾಜಮಾನಗೊಂಡ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ತಾಯಿ ಚಾಮುಂಡಿಯನ್ನು ೭೫೦ ಕೆಜಿ ತೂಕದ ಚಿನ್ನದ ಅಂಬಾರಿಯಲ್ಲಿಟ್ಟು, ಮೆರವಣಿಗೆ ಮಾಡಲಾಗುತ್ತದೆ.ಆರನೇ ಬಾರಿಗೆ ಕ್ಯಾಪ್ಟನ್ ಅಭಿಮನ್ಯು ಅಂಬಾರಿ ಹೊತ್ತು ಬನ್ನಿ ಮಂಟಪದ ವರೆಗೆ ಸಾಗಲಿದೆ. ಕಾವೇರಿ ಮತ್ತು ರೂಪಾ ಕುಮ್ಕಿ ಆನೆಗಳಾಗಿ ಸಾಥ್ ನೀಡಲಿವೆ. ನಿಶಾನೆ ಆನೆಯಾಗಿ ಧನಂಜಯ ಹಾಗೂ ನೌಪತ್ ಆನೆಯಾಗಿ ಗೋಪಿ ಮುನ್ನಡೆಯಲಿದೆ. ಈ ಬಾರಿ ಮೆರವಣಿಗೆಯಲ್ಲಿ ೫೮ ಸ್ತಬ್ಧ ಚಿತ್ರಗಳು ೧೨೫ಕ್ಕೂ ಹೆಚ್ಚು ಕಲಾತಂಡಗಳು ೧೪ ಆನೆಗಳು ಅಶ್ವಾರೋಹಿ ಪಡೆಗಳು ಭಾಗವಹಿಸಲಿವೆ. ಭದ್ರತಾ ದೃಷ್ಟಿಯಿಂದ ಸುಮಾರು ೬ ಸಾವಿರದ ೫೦೦ಕ್ಕೂ ಹೆಚ್ಚು ಪೊಲೀಸರನ್ನು

ನಿಯೋಜಿಸಲಾಗಿದೆ.  ಈ ನಡುವೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯಾಹ್ನ ೧ ರಿಂದ ೧.೧೮ರ ಶುಭ ಧನುರ್ ಲಗ್ನದಲ್ಲಿ ನಂದಿಧ್ವಜ ಪೂಜೆ ನೆರವೇರಿಸಿದರು.ಬಳಿಕ ಮಾತನಾಡಿದ ಅವರು, ರಾಜ್ಯದಲ್ಲಿ ಮಳೆ, ಬೆಳೆ ಚೆನ್ನಾಗಿದ್ದು, ರಾಜ್ಯದ ಜನರು ಸಂತಸಗೊಂಡಿದ್ದಾರೆ ಎಂದು ಹೇಳಿದರು. ಇನ್ನೊಂದೆಡೆ ನಾಡಹಬ್ಬ ದಸರಾ ಅಂಗವಾಗಿ ಯದುವೀರ್ ಒಡೆಯರ್ ಅರಮನೆ ಆವರಣದಲ್ಲಿರುವ ಭುವನೇಶ್ವರಿ ದೇವಸ್ಥಾನದ ಬಳಿ ಬನ್ನಿಮರಕ್ಕೆ ಪೂಜೆ ಸಲ್ಲಿಸಿದ್ದಾರೆ. ವಜ್ರಮುಷ್ಠಿ ಕಾಳಗ ಮುಕ್ತಾಯವಾಗುತ್ತಿದ್ದಂತೆ ಭುವನೇಶ್ವರಿ ದೇವಾಲಯದವರೆಗೆ ನಡೆದ ವಿಜಯಯಾತ್ರೆಯಲ್ಲಿ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಬಳಸುತ್ತಿದ್ದ ಕಾರಿನಲ್ಲಿ ಯದುವೀರ್ ವಿಜಯಯಾತ್ರೆ ನಡೆಸಿದರು. ಪೂಜೆ ಮುಗಿಯುತ್ತಿದ್ದಂತೆ ಯದುವೀರ್ ಅರಮನೆಗೆ ಹಿಂತಿರುಗಿದ್ದು, ಅರಮನೆ ದಸರಾ ಮುಕ್ತಾಯಗೊಂಡಿದೆ.

*********

ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಜಂಬೂ ಸವಾರಿಯ ಚಿನ್ನದ ಅಂಬಾರಿ ಮೇಲೆ ಲಕ್ಷಾಂತರ ಜನರಿಗೆ ದರ್ಶನ ನೀಡುವ ಚಾಮುಂಡೇಶ್ವರಿ ಮೂರ್ತಿಯನ್ನು ಚಾಮುಂಡಿ ಬೆಟ್ಟದಿಂದ ಮೈಸೂರು ಅರಮನೆಗೆ ತರಲಾಗಿದೆ. ಇಂದು ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪುಷ್ಪಾರ್ಚನೆ ಮಾಡುವ ಹಿನ್ನೆಲೆಯಲ್ಲಿ ಚಾಮುಂಡಿ ಬೆಟ್ಟದ ಉತ್ಸವ ಮೂರ್ತಿಯನ್ನು ಅರಮನೆಗೆ ಹಸ್ತಾಂತರಿಸಲಾಗಿದೆ, ಚಾಮುಂಡಿ ಬೆಟ್ಟದಿಂದ ಸ್ತಬ್ಧ ಚಿತ್ರದ ಮೂಲಕ ಮೆರವಣಿಗೆಯಲ್ಲಿ ಅರಮನೆಗೆ ತರಲಾಯಿತು.

*********

ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ಗೋಣಿಕೊಪ್ಪದಲ್ಲಿ ಇಂದು ರಾತ್ರಿ ವಿಜಯದಶಮಿ ಹಬ್ಬಕ್ಕಾಗಿ ಸಿದ್ಧತೆಗಳು ನಡೆಯುತ್ತಿದೆ. ದಶಮಂಟಪಗಳು ಮಡಿಕೇರಿಯ ಮುಖ್ಯ ರಸ್ತೆಯಲ್ಲಿ ರಾತ್ರಿ ಲಗಂಟೆ ವೇಳೆಗೆ ಶೋಭಾಯಾತ್ರೆ ಪ್ರಾರಂಭಿಸಲಿದ್ದು,  ನಾಳೆ ಮುಂಜಾನೆ ಬನ್ನಿ ಕಡಿಯುವ ಮೂಲಕ ಮಡಿಕೇರಿ ದಸರಾಕ್ಕೆ ತೆರೆ ಬೀಳಲಿದೆ. ಮಂಗಳೂರಿನ ಪ್ರಸಿದ್ಧ ಕುದ್ರೋಳಿ ಗೋಕರ್ಣನಾಥೇಶ್ವರ ಕ್ಷೇತ್ರದ ಮಂಗಳೂರು ದಸರಾ ಶೋಭಾಯಾತ್ರೆ ಇಂದು ವಿಜೃಂಭಣೆಯಿಂದ ನೆರವೇರಲಿದೆ. ಸಂಜೆ ೪ ಗಂಟೆಯಿಂದ ಶೋಭಾಯಾತ್ರೆ ಹೊರಡಲಿದ್ದು, ನವದುರ್ಗೆಯರು ಬ್ರಹ್ಮಶ್ರೀ ನಾರಾಯಣ ಗುರುಗಳ ವಿಗ್ರಹ ಸಹಿತ ದಸರಾ ಮೆರವಣಿಗೆ ನಗರದಲ್ಲಿ ಸಾಗಿ ಬರಲಿದೆ. ನವರಾತ್ರಿಯ ಕೊನೆಯ ದಿನವಾದ ಇಂದು ವಿಜಯದಶಮಿ ಹಬ್ಬವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಡಗರ, ಸಂಭ್ರಮದಿಂದ  ಆಚರಿಸಲಾಗುತ್ತಿದೆ. ಇಂದು ಬನ್ನಿಮರಗಳನ್ನು ಪೂಜಿಸಿ ಆಚರಣೆಯನ್ನು ನೆರವೇರಿಸುವುದು ವಿಶೇಷವಾಗಿದೆ.

*********

ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೂ ದಸರಾ-ದೀಪಾವಳಿ ಹಬ್ಬದ ವೇಳೆ ಹೆಚ್ಚುವರಿ ತೆರಿಗೆ ಹಂಚಿಕೆಯ ಉಡುಗೊರೆ ನೀಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಕರ್ನಾಟಕ ಸೇರಿದಂತೆ ಎಲ್ಲಾ ೨೮ ರಾಜ್ಯ ಸರ್ಕಾರಗಳಿಗೂ ಕೇಂದ್ರ ಹಣಕಾಸು ಸಚಿವಾಲಯ ಒಟ್ಟಾರೆ ೧ ಲಕ್ಷದ ೧ ಸಾವಿರದ ೬೦೩ ಕೋಟಿ ರೂಪಾಯಿ ಹೆಚ್ಚುವರಿ ತೆರಿಗೆ ಹಂಚಿಕೆ ಹಣವನ್ನು ಬಿಡುಗಡೆ ಮಾಡಿದೆ. ಕರ್ನಾಟಕಕ್ಕೆ ೩ ಸಾವಿರದ ೭೦೫ ಕೋಟಿ ರೂಪಾಯಿ ಹೆಚ್ಚುವರಿ ತೆರಿಗೆ ಪಾಲನ್ನು ಒದಗಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.ರಾಜ್ಯಗಳ ಬಂಡವಾಳ ವೆಚ್ಚವನ್ನು ವೇಗಗೊಳಿಸಲು ಹಾಗೂ ಅಭಿವೃದ್ಧಿ, ಕಲ್ಯಾಣ ಕಾರ್ಯಗಳ ವೆಚ್ಚಕ್ಕೆ ಆರ್ಥಿಕ ನೆರವು ಒದಗಿಸುವ ದಿಸೆಯಲ್ಲಿ ಕೇಂದ್ರ ಸರ್ಕಾರ ದೇಶದ ಎಲ್ಲಾ ೨೮ ರಾಜ್ಯ ಸರ್ಕಾರಗಳಿಗೂ ತೆರಿಗೆ ಹಂಚಿಕೆಯನ್ನು ಮುಂಗಡ ಕಂತಾಗಿ ಬಿಡುಗಡೆ ಮಾಡಿದೆ. ರಾಜ್ಯ ಸರ್ಕಾರಗಳು ಅಭಿವೃದ್ಧಿ ಕಾರ್ಯಗಳಿಗೆ ಇದನ್ನು ಸಮರ್ಪಕವಾಗಿ ಬಳಸಿಕೊಳ್ಳಲಿ ಎಂದು  ಸಲಹೆ ನೀಡಿದ್ದಾರೆ. ಅತಿವೃಷ್ಟಿಯಿಂದಾಗಿ ರಾಜ್ಯದ ರೈತರು ತತ್ತರಿಸಿ ಹೋಗಿದ್ದು ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಸೇರಿದಂತೆ ರಾಜ್ಯಾದ್ಯಾಂತ ವಿಪರೀತ ಮಳೆಯಿಂದ ರೈತರು ಬೆಳೆಹಾನಿಗೆ ಒಳಗಾಗಿದ್ದಾರೆ. ಈ ಸಂಕಷ್ಟ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರ ವಿವಿಧ ಬೆಳೆಗಳಿಗೆ ಬೆಂಬಲ ಬೆಲೆಯ ನೆರವು ಕಲ್ಪಿಸಿದೆ. ರಾಜ್ಯ ಸರ್ಕಾರ ಅನ್ನದಾತರಿಗೆ ಇದನ್ನು ಸಮರ್ಪಕವಾಗಿ ತಲುಪಿಸಲಿ ಎಂದು ಹೇಳಿದ್ದಾರೆ.

*********

ವಿಧಾನಸೌಧ ಮುಂಭಾಗ ಇಂದು ನಡೆದ ವನ್ಯಜೀವಿ ಸಪ್ತಾಹ ಹಾಗೂ ಕಾಲ್ನಡಿಗೆ ಜಾಥಾಗೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಅರಣ್ಯ ಸಚಿವ ಈಶ್ವರ್ ಖಂಡ್ರೆ ಚಾಲನೆ ನೀಡಿದರು. ಇದೇ ವೇಳೆ ಮಾತನಾಡಿದ  ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ತಮ್ಮ ಸುತ್ತಲಿನ ಪರಿಸರವನ್ನು ಕಾಪಾಡಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ತಿಳಿಸಿದ್ದಾರೆ.  ಹುಲಿ, ಜಿಂಕೆ ಆನೆಗಳು ನಮ್ಮ ಪ್ರಾಕೃತಿಕ ಆಸ್ತಿಗಳು" ಎಂದು ಹೇಳಿದ್ದಾರೆ. ಅನಿಲ್ ಕುಂಬ್ಳೆಯವರಂತೆ ಎಲ್ಲರೂ ಪ್ರಾಕೃತಿಕ ಸಂಪತ್ತನ್ನು ಉಳಿಸುವ  ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದ್ದಾರೆ. ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಮಾತನಾಡಿ, ವನ್ಯಜೀವಿಗಳೊಂದಿಗೆ ಸಹಬಾಳ್ವೆ ಇಂದಿನ ಅಗತ್ಯ ಎಂದು ತಿಳಿಸಿದ್ದಾರೆ.

*********

ಅನಾರೋಗ್ಯದಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ದೂರವಾಣಿ ಮೂಲಕ ಕರೆ ಮಾಡಿರುವ ಪ್ರಧಾನಿ ನರೇಂದ್ರ ಮೋದಿ ಅವರು ಆರೋಗ್ಯ ವಿಚಾರಿಸಿದ್ದಾರೆ. ಖರ್ಗೆ ಅವರು ಬೇಗ ಗುಣಮುಖರಾಗಲಿ ಮತ್ತು ದೀರ್ಘಾಯುಷ್ಯ ಅವರದ್ದಾಗಲಿ ಎಂದು ಪ್ರಾರ್ಥಿಸುತ್ತೇನೆ ಎಂಬುದಾಗಿ ಪ್ರಧಾನಿ ಎಕ್ಸ್ ಸಂದೇಶದಲ್ಲಿ ತಿಳಿಸಿದ್ದಾರೆ. ಮತ್ತೊಂದೆಡೆ, ಖರ್ಗೆ ಅವರಿಗೆ ಪೇಸ್‌ಮೇಕರ್ ಅಳವಡಿಕೆ ಯಶಸ್ವಿಯಾಗಿದೆ ಎಂದು ಪುತ್ರ, ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದ್ದಾರೆ.

*********

ದೇಶಾದ್ಯಂತ ಇಂದು ಗಾಂಧಿ ಜಯಂತಿಯನ್ನು ಆಚರಿಸಲಾಗುತ್ತಿದೆ. ಗಾಂಧೀಜೀ ನೇತೃತ್ವದಲ್ಲಿ ನಡೆದ ಹೋರಾಟದ ಫಲದಿಂದ ನಾವಿಂದು ಸ್ವಾತಂತ್ರ್ಯವನ್ನು ಅನುಭವಿಸುತ್ತಿದ್ದೇವೆ. ಅವರ ತ್ಯಾಗ, ಬಲಿದಾನಗಳು ಸದಾ ನಮಗೆ ಆದರ್ಶಪ್ರಾಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮೈಸೂರಿನ ಮಹಾತ್ಮ ಗಾಂಧಿ ವೃತ್ತದಲ್ಲಿ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು ಇಂದು ಮಾಜಿ ಪ್ರಧಾನಮಂತ್ರಿ ಲಾಲ್ ಬಹಾದ್ದೂರ್ ಶಾಸ್ತ್ರಿ ಅವರ ಜನ್ಮದಿನವಾಗಿದ್ದು ದೇಶ ಕಂಡ ಅತ್ಯಂತ ಪ್ರಾಮಾಣಿಕ ಪ್ರಧಾನಿ ಲಾಲ್ ಬಹಾದ್ದೂರ್ ಶಾಸ್ತ್ರೀ ಎಂದು ಸ್ಮರಿಸಿದರು.

***********

ರಾಜ್ಯದ ವಿವಿಧೆಡೆ ಗಾಂಧಿಜಯಂತಿ ಹಾಗೂ ಮಾಜಿ ಪ್ರಧಾನಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿಯನ್ನು ಆಚರಿಸಲಾಯಿತು.ಬೆಂಗಳೂರಿನ ಎಂ.ಜಿ. ರಸ್ತೆಯಲ್ಲಿ ಗಾಂಧಿ ಪ್ರತಿಮೆಗೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ ರಾವ್ ಮಾಲಾರ್ಪಣೆ ಮಾಡಿ, ಪುಷ್ಪನಮನ ಸಲ್ಲಿಸಿದರು. ಬೆಂಗಳೂರು ನಗರ ವಿಶ್ವ ವಿದ್ಯಾನಿಲಯದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಬಿಸಿಯು ಕುಲಪತಿ ಪ್ರೊ. ಬಿ. ರಮೇಶ್, ಗಾಂಧೀಜಿ ಅವರ ಸರ್ವೋದಯ, ಸಾಮಾಜಿಕ ನ್ಯಾಯತತ್ವ ಇಂದಿಗೂ ಪ್ರಸ್ತುತ ಎಂದು ತಿಳಿಸಿದರು. ೧೯೨೪ರಲ್ಲಿ ಮಹಾತ್ಮಾ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್ ಅಧಿವೇಶನ ಜರುಗಿದ ಬೆಳಗಾವಿ ಟಿಳಕವಾಡಿಯ ಐತಿಹಾಸಿಕ ಸ್ಥಳ ವೀರಸೌಧದಲ್ಲಿ ಇಂದು ಮಹಾತ್ಮಾ ಗಾಂಧೀಜಿ ಹಾಗೂ ಲಾಲಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಆಚರಿಸಲಾಯಿತು. ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ೧೫೬ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಬೆಂಗಳೂರು ನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆಯಿತು.